ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(5ರಿಂದ 8ರವರೆಗಿನ ಖಂಡಗಳು ವಿಧೇಯಕದ ಅಂಗವಾಯಿತು)

ಖಂಡ 1 ಇತ್ಯಾದಿ :

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಅನುಮೋದನಾ ಪ್ರಸ್ತಾವ

ಶ್ರೀ ಸಿದ್ದರಾಮಯ್ಯ (ಹಣಕಾಸಿನ ಸಚಿವರು):- ಮಾನ್ಯ ಅಧ್ಯಕ್ಷರೇ, ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕ 1995 ಅನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ 1995ರ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕ 1995 ಅನ್ನು ತಿದ್ದುಪಡಿ ಮಾಡುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ 1995

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಕೆ.ಎಸ್.ಬೇಳಗಿ (ಸಾರಿಗೆ ಮಂತ್ರಿಗಳು):- ಮಾನ್ಯ ಅಧ್ಯಕ್ಷರೇ, 1995ರ ಕರ್ನಾಟಕ

ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನೆಯನ್ನು ಅಂಗೀಕರಿಸಲಾಯಿತು

ಅಧ್ಯಕ್ಷರು :- ಪ್ರಸಾವ ಏನೆಂದರೆ 1995ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 6ರವರೆಗೆ

ಅಧ್ಯಕ್ಷರು :- ಖಂಡ 2ರಿಂದ 6ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 6ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 7 ತಿದ್ದುಪಡಿ:

ಶ್ರೀ ಕೆ.ಎಸ್.ಬೀಳಗಿ (ಸಾರಿಗೆ ಸಚಿವರು) :- ಮಾನ್ಯ ಅಧ್ಯಕ್ಷರೇ, ಸದರಿ ವಿಧೇಯಕದ 7ನೇ ಖಂಡದಲ್ಲಿ (ಎ) ಉಪ-ಖಂಡದಲ್ಲಿ, (2)ನೇ ಬಾಬಿನಲ್ಲಿ (ಗಿಗಿ)ನೇ ಉಪ ಬಾಬಿನಲ್ಲಿ 45000' ಎಂಬ ಅಂಕಿಗಳಿಗೆ 42500' ಎಂಬ ಅಂಕಿಗಳನ್ನು ಪ್ರತಿಯೋಜಿಸತಕ್ಕದ್ದು.

ಅಧ್ಯಕ್ಷರು:- ತಿದ್ದುಪಡಿಯನ್ನು ಮಂಡಿಸಲಾಗಿದೆ.

ಶ್ರೀ ಕೆ.ಎಸ್.ಬೀಳಗಿ (ಸಾರಿಗೆ ಸಚಿವರು):- ಮಾನ್ಯ ಅಧ್ಯಕ್ಷರೇ, ಈ ಬಜೆಟ್ ಪ್ರಪೋಸಲ್ಸ್‌ನಲ್ಲಿ ಈ ಖಾಸಗಿ ಬಸ್ಸ್‌ಗಳಿಗೆ ಪ್ರತಿ ಸೀಟಿಗೆ 450 ರೂಪಾಯಿ ಟ್ಯಾಕ್ಸ್ ಹಾಕಬೇಕು ಎಂದು ಇದ್ದುದ್ದನ್ನು ಕಡಿಮೆ ಮಾಡಿ ಈಗ ಪ್ರತಿ ಸೀಟಿಗೆ 425 ರೂಪಾಯಿ ಹಾಕಲು ಈ ತಿದ್ದುಪಡಿಯನ್ನು ಮಂಡಿಸುತ್ತಿದ್ದೇನೆ. ದಯವಿಟ್ಟು ಈ ಸಭೆಯು ಅದನ್ನು ಒಪ್ಪಿಕೊಳ್ಳಬೇಕು.

ಶ್ರೀ ಎ.ರುಕ್ಮಯ್ಯ ಪೂಜಾರಿ :- ಕೇರಳದಲ್ಲಿ ಖಾಸಗೀ ಬಸ್‌ಗಳಿಗೆ 400 ರೂಪಾಯಿ ತೆಗೆದುಕೊಳ್ಳುತ್ತಿದ್ದಾರೆ. ಆಂಧ್ರದಲ್ಲಿ ಮತ್ತು ಮದ್ರಾಸ್‌ನಲ್ಲಿಯೂ ಕೂಡ 300 ರೂಪಾಯಿ ಇದೆ. ಇಲ್ಲಿಯೂ ಕೂಡ ಅದನ್ನು ಕಡಿಮೆ ಮಾಡಬೇಕೆಂದು ಒತ್ತಾಯ ಮಾಡುತ್ತೇನೆ.

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):- ಇದನ್ನು ಖಾಸಗಿ ಮಾಲೀಕರೆ ಒಪ್ಪಿದ್ದಾರೆ ಮಾನ್ಯ ಅಧ್ಯಕ್ಷರೇ.

ಅಧ್ಯಕ್ಷರು :- ಈಗ ತಿದ್ದುಪಡಿಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ತಿದ್ದುಪಡಿಯಾದ ಖಂಡ 7 ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 8 ಮತ್ತು 9

ಅಧ್ಯಕ್ಷರು:- ಖಂಡ 8 ಮತ್ತು 9 ಈ ವಿಧೇಯಕದ ಅಂಗವಾಗಿರುತ್ತದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 8 ಮತ್ತು 9 ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ:

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಕೆ.ಎಸ್.ಬೀಳಗಿ(ಸಾರಿಗೆ ಸಚಿವರು):- ಮಾನ್ಯ ಅಧ್ಯಕ್ಷರೇ, 1995ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು

ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ 195ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ(ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸಬಹುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಸ್ಟ್ಯಾಂಪುಗಳ (ತಿದ್ದುಪಡಿ) ವಿಧೇಯಕ 1995
ಪರ್ಯಾಲೋಚನಾ ಪ್ರಸ್ತಾವ

ಶ್ರೀ ಆರ್.ಎಲ್.ಜಾಲಪ್ಪ (ಕಂದಾಯ ಮಂತ್ರಿಗಳು) :- ಮಾನ್ಯ ಅಧ್ಯಕ್ಷರೇ, 1995ರ ಕರ್ನಾಟಕ ಸ್ಟ್ಯಾಂಪುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನೆಯನ್ನು ಮಂಡಿಸಲಾಯಿತು

ಅಧ್ಯಕ್ಷರು :- ಪ್ರಸ್ತಾವನೆ ಏನೆಂದರೆ 1995ರ ಕರ್ನಾಟಕ ಸ್ಟ್ಯಾಂಪುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 5ರವರೆಗೆ

ಅಧ್ಯಕ್ಷರು :- ಖಂಡ 2ರಿಂದ 5 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 5ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ: